3

ಕರ್ನಾಟಕ ವಿಧಾನ ಸಭೆ, ಬೆಂಗಳೂರು ... ಗ್ರಂಥಾಲಯ ... ಶಾಖೆ
KARNATAKA LEGISLATIVE ASSEMBLY LIBRARY AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಾರಿಗೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 29/1/2020

## ದೇಶದೆಲ್ಲೆಡೆ ಏಕರೂಪದ ವಾಹನ ತೆರಿಗೆ

# ಅಧಿವೇಶನದಲ್ಲಿ ಕಾನೂನು

**ಬೆಂಗಳೂರು:** ಕೇಂದ್ರ ಸರ್ಕಾರವು ಒನ್ ನೇಷನ್ ಒನ್ ಟ್ಯಾಕ್ಸ್ ತರಲು ನಿರ್ಧರಿಸಿರುವುದರಿಂದ ರಾಜ್ಯ ಸರ್ಕಾರವೂ ಮುಂದಿನ ಅಧಿವೇಶನದಲ್ಲಿ ಕಾನೂನು ಜಾರಿಗೆ ತರಲಿದೆ ಎಂದು ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಹೆಚ್ಚು ಬೆಲೆಯುಳ್ಳ ವಾಹನಗಳ ನೋಂದಣಿ ಬೇರೆ ಬೇರೆ ರಾಜ್ಯಗಳಲ್ಲಿ ಮಾಡಿ ಇಲ್ಲಿಗೆ ತರುತ್ತಿದ್ದಾರೆ. ಹೀಗಾಗಿ, ಕೇಂದ್ರ ಸರ್ಕಾರವು ಎಲ್ಲ ರಾಜ್ಯಗಳಲ್ಲೂ ಒಂದೇ ರೀತಿಯ ತೆರಿಗೆ ಪದ್ಧತಿ ಜಾರಿಗೊಳಿಸಲು ಮುಂದಾಗಿದೆ ಎಂದರು. ಕೇಂದ್ರ ಸರ್ಕಾರದ ಕ್ರಮಕ್ಕೆ ಪೂರಕವಾಗಿ ರಾಜ್ಯ ಸರ್ಕಾರ ಕಾನೂನು ರೂಪಿಸಿ, ವಿಧಾನಮಂಡಲದ ಒಪ್ಪಿಗೆ ಪಡೆಯಲಿದೆ ಎಂದು ಹೇಳಿದರು.

ಒನ್ ನೇಷನ್ ಒನ್ ಟ್ಯಾಕ್ಸ್ ಪದ್ಧತಿ ಜಾರಿಗೆ ಬಂದರೆ ರಾಜ್ಯಕ್ಕೆ 1 ಸಾವಿರ ಕೋಟಿ ರೂ. ಕೊರತೆ ಆಗಬಹುದು ಎಂದು ಅಂದಾಜು ಮಾಡಲಾಗಿದೆ. ಪ್ರಸ್ತುತ ರಾಜ್ಯ ಸರ್ಕಾರವು ಶೇ.16, 18, ಹಾಗೂ 20 ಮೂರು ಸ್ಲ್ಯಾಬ್‌ಗಳಲ್ಲಿ ತೆರಿಗೆ ಹಾಕುತ್ತಿದೆ. ಕೇಂದ್ರ ಸರ್ಕಾರವು ಶೇ.8, 12, 10 ರಷ್ಟು ತೆರಿಗೆ ಹಾಕುತ್ತಿದೆ. ಹೀಗಾಗಿ, ಕೊರತೆಯಾಗಬಹುದು. ಆದರೆ, ಅದಕ್ಕೆ ಪರಿಹಾರೋಪಾಯ ಕಂಡು ಹಿಡಿಯಲಾಗುವುದು ಎಂದು ತಿಳಿಸಿದರು.

ಕೆಎಸ್‌ಆರ್‌ಟಿಸಿ ಹಾಗೂ ಬಿಎಂಟಿಸಿ ನೌಕರರ ಮುಷ್ಕರ ಕುರಿತು ಪ್ರತಿಕ್ರಿಯಿಸಿದ ಅವರು, 1.30 ಲಕ್ಷ ಚಾಲಕರು ಹಾಗೂ ನಿರ್ವಾಹಕರು ಕೆಲಸ ಮಾಡುತ್ತಿದ್ದಾರೆ. ಅವರು ನಮ್ಮನ್ನೂ ಸರ್ಕಾರಿ ನೌಕರರು ಅಂತ ಪರಿಗಣಿಸಲು ಬೇಡಿಕೆ ಇದೆ. ಈ ಬಗ್ಗೆ ಸಮಿತಿ ರಚಿಸಲು ಮುಖ್ಯಮಂತ್ರಿಯವರು ಸೂಚಿಸಿದ್ದಾರೆ ಎಂದು ಹೇಳಿದರು.

## ಡ್ಯಾಂಗಳ ನೀರು ಕುಡಿಯಲು ಮೀಸಲಿಟ್ಟು ಬೆಳೆಗೂ ಹರಿಸಲು ಕ್ರಮ



**ಬೆಂಗಳೂರು:** ರಾಜ್ಯದ ಜಲಾಶಯಗಳಲ್ಲಿರುವ ನೀರು ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೀಸಲಿಟ್ಟು ಉಳಿದ ನೀರನ್ನು ಬೇಸಿಗೆ ಬೆಳೆಗಳಿಗೆ ಅಗತ್ಯಕ್ಕೆ ತಕ್ಕಂತೆ ಹರಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಈಗಾಗಲೇ ಜಲಾಶಯಗಳಲ್ಲಿ ಸಂಗ್ರಹ ಮಾಡಿರುವ ನೀರು ಹಾಗೂ ಕುಡಿಯಲು ಪೂರೈಕೆ ಮಾಡಲು ಅಗತ್ಯ ಪ್ರಮಾಣ, ಉಳಿಯುವ ಪ್ರಮಾಣದ ಬಗ್ಗೆ ಮಾಹಿತಿ ಪಡೆಯಲಾಗಿದೆ. ಕುಡಿಯುವ ನೀರಿಗೆ ಸರ್ಕಾರ ಮೊದಲ ಆದ್ಯತೆ ನೀಡಲಾಗುತ್ತದೆ. ಆ ನಂತರ ಅಗತ್ಯಕ್ಕೆ ತಕ್ಕಂತೆ ಬೆಳೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರವಾಹ ಹಾಗೂ ಜಲಾಶಯಗಳಿಂದ ರೈತರ ಜಮೀನುಗಳಲ್ಲಿ ಮಣ್ಣು ತುಂಬಿಕೊಂಡಿದ್ದು ಮುಂದಿನ ವರ್ಷದ ವೇಳೆಗೆ ಭೂಮಿ ಫಲವತ್ತತೆ ಆಗಲಿದೆ. ಬೆಳೆ ಹಾನಿಗೆ ಪರಿಹಾರ ಸಂಬಂಧ ರೈತರಿಂದ ಕ್ಲೈಮ್ ಪಡೆಯಲಾಗುತ್ತಿದೆ. ಕೆಲವೆಡೆ ತಾಂತ್ರಿಕ ಸಮಸ್ಯೆಗಳಿಂದ ತಡವಾಗುತ್ತಿದೆ ಎಂದು ಹೇಳಿದರು.

ಉತ್ತರ ಕರ್ನಾಟಕ ಭಾಗದಲ್ಲಿ ಕಬ್ಬು ಬೆಳೆಯುವ ಪ್ರದೇಶಗಳಲ್ಲಿ ಸಕ್ಕರೆ ಕಾರ್ಖಾನೆಗಳಿಗೆ ಈ ವರ್ಷ ಸಕ್ಕರೆ ಉತ್ಪನ್ನ ಕಡಿಮೆ ಮಾಡಿ ಮೊಲಾಸಿಸ್ ಹಾಗೂ ಎಥೆನಾಲ್ ಪ್ರಮಾಣ ಹೆಚ್ಚಿಸಲು ತಿಳಿಸಲಾಗಿದೆ. ಇತ್ತೀಚೆಗೆ ಪ್ರಧಾನಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉತ್ತರಪ್ರದೇಶ, ಗುಜರಾತ್, ಮಹಾರಾಷ್ಟ್ರಕ್ಕೂ ಇದೇ ರೀತಿಯ ಸೂಚನೆ ನೀಡಲಾಗಿದೆ. ಇದರಿಂದ ತೈಲ ಆಮದು ಪ್ರಮಾಣ ಕಡಿಮೆಯಾಗಲಿದೆ ಎಂದರು.

ಇಸ್ರೇಲ್ ಮಾದರಿ ಕೃಷಿ ಪೈಲಟ್ ಯೋಜನೆಯಡಿ ಕೈಗೊಂಡ ಪ್ರದೇಶಗಳಿಂದ ಇನ್ನೂ ವರದಿ ಬಂದಿಲ್ಲ. ವರದಿ ಬಂದ ನಂತರ ಅಧ್ಯಯನ ನಡೆಸಿ ಮುಂದೆ ಮತ್ತಷ್ಟು ವಿಸ್ತರಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

## ಹೊಸ ಬಸ್ ಖರೀದಿ

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ 1200 ಹೊಸ ಬಸ್‌ಗಳ ಖರೀದಿಗೆ ತೀರ್ಮಾನಿಸಲಾಗಿದೆ. ಆ ಪೈಕಿ 356 ಬಸ್ ಬಿಎಂಟಿಸಿಗೂ ಲಭ್ಯವಾಗಲಿವೆ. ಎಲೆಕ್ಟ್ರಿಕ್ ಬಸ್ ಖರೀದಿ ಸಂಬಂಧ ಒಂದು ಸಂಸ್ಥೆ ಮುಂದೆ ಬಂದಿತ್ತು. ಆದರೆ, ಸಿಂಗಲ್ ಟೆಂಡರ್ ಮಾತ್ರ ಆಗಿ ಬರದಲ್ಲಿ ನಮಗೆ ಸಮಾಧಾನವಾಗಲಿಲ್ಲ. ಹೀಗಾಗಿ, ಟೆಂಡರ್ ರದ್ದುಪಡಿಸಿ ಮರು ಟೆಂಡರ್ ಕರೆದಿದ್ದೇವೆ. 300 ಎಲೆಕ್ಟ್ರಿಕ್ ಬಸ್ ಬಂದರೆ ಬೆಂಗಳೂರಿನ ಪ್ರಯಾಣಿಕರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.